Bangalore
Regional News
22.09.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧.ಸಾಮಾಜಿಕ, ಆರ್ಥಿಕ ಸಮೀಕ್ಷೆಗೆ ಅಕ್ಷೇಪ; ನಾಳೆಗೆ ವಿಚಾರಣೆ ಮುಂದೂಡಿದ ಉಚ್ಚ ನ್ಯಾಯಾಲಯ

೨.ಮೈಸೂರಿನಲ್ಲಿ ದಸರಾ ಕುಸ್ತಿ, ಫಲಪುಷ್ಪ ಪ್ರದರ್ಶನ, ಆಹಾರೋತ್ಸವಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಚಾಲನೆ

೩. ದೇಶಾದ್ಯಂತ ನೂತನ ಜಿಎಸ್‌ಟಿ ಜಾರಿ - ತುಮಕೂರಿನಲ್ಲಿ ಸಚಿವ ಸೋಮಣ್ಣ ಪ್ರಚಾರ ಅಭಿಯಾನ

೪. ಉತ್ತರ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಇಂದು ಧಾರಾಕಾರ ಮಳೆ - ಹವಮಾನ ಇಲಾಖೆ ಮುನ್ಸೂಚನೆ

><><><><><

ರಾಜ್ಯ ಸರ್ಕಾರ ನಡೆಸುತ್ತಿರುವ ಸಾಮಾಜಿಕ ಆರ್ಥಿಕ ಸಮೀಕ್ಷೆಗೆ ಮಧ್ಯಂತರ ತಡೆ ನೀಡುವಂತೆ ಕೋರಿ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಕೆಯಾಗಿದ್ದ ಅರ್ಜಿ ವಿಚಾರಣೆ ನಾಳೆಗೆ ಮುಂದೂಡಿಕೆಯಾಗಿದೆ. ದಸರಾ ರಜೆ ಇರುವುರಿಂದ ಶಿಕ್ಷಕರು ಮತ್ತು ಆಶಾ ಕಾರ್ಯಕರ್ತೆಯರನ್ನು ಸಮೀಕ್ಷೆಗೆ ಬಳಸಲಾಗುತ್ತಿದೆ. ಈಗಾಗಲೇ ಕೆಲಸ ಆರಂಭವಾಗಿರುವ ಕಾರಣ ಯಾವುದೇ ಕಾರಣಕ್ಕೂ ಮಧ್ಯಂತರ ಆದೇಶ ನೀಡಬಾರದು ಎಂದು ಸರ್ಕಾರ ಮನವಿ ಮಾಡಿದೆ. ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿ.ಎಂ.ಜೋಶಿ ಅವರಿದ್ದ ವಿಭಾಗೀಯ ಪೀಠದಲ್ಲಿ ವೀರಶೈವ ಲಿಂಗಾಯತ ಮಹಾಸಭಾ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಮತ್ತು ರಾಜ್ಯ ಒಕ್ಕಲಿಗರ ಸಂಘ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಇಂದು ನಡೆಯಿತು. ಕೇಂದ್ರ ಸರ್ಕಾರ ಈ ಸಮೀಕ್ಷೆಗೆ ವಿರೋಧ ವ್ಯಕ್ತಪಡಿಸಿದರೆ ರಾಜ್ಯ ಸರ್ಕಾರ ಬಲವಾಗಿ ಸಮರ್ಥಿಸಿಕೊಂಡಿz. ವಿಚಾರಣೆ ಸಂದರ್ಭದಲ್ಲಿ ಅಮಿಕಸ್ ಕ್ಯೂರಿಯನ್ನು ನೇಮಿಸುವ ಚಿಂತನೆ ಮಾಡಲಾಗಿದೆ ಎಂದು ನ್ಯಾಯಾಲಯ ತಿಳಿಸಿದೆ. ವೀರಶೈವ ಲಿಂಗಾಯತ ಮಹಾಸಭಾದ ಪರವಾಗಿ ಪ್ರಭುಲಿಂಗ ನಾವದಗಿ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಪರವಾಗಿ ವಿವೇಕ್ ಸುಬ್ಬಾರೆಡ್ಡಿ, ರಾಜ್ಯ ಒಕ್ಕಲಿಗರ ಸಂಘದ ಪರವಾಗಿ

ಅಶೋಕ್ ಹಾರನಹಳ್ಳಿ ವಾದಿಸಿದರು. ಕೇಂದ್ರ ಸರ್ಕಾರದ ಪರವಾಗಿ ಹೆಚ್ಚುವರಿ ಸಾಲಿಸಿಟರ್ ಜನರಲ್ ಅರವಿಂದ ಕಾಮತ್, ರಾಜ್ಯ ಸರ್ಕಾರದ ಪರವಾಗಿ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಮತ್ತು ಅಭಿಷೇಕ್ ಮನುಸಿಂಘ್ವಿ ವಾದ ಮಂಡಿಸಿದರು.

><><><><

ಬೆಂಗಳೂರು ಹೊರತು ಪಡಿಸಿ ಗಣತಿದಾರರಿಂದ ರಾಜ್ಯದ ವಿವಿಧೆಡೆ ಸಾಮಾಜಿಕ ಆರ್ಥಿಕ, ಮನೆ ಮನೆ ಸಮೀಕ್ಷೆ ನಡೆಯುತ್ತಿದೆ. ಬಾಗಲಕೋಟೆ ಜಿಲ್ಲೆಯಾದ್ಯಂತ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಹಮ್ಮಿಕೊಂಡ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಬಾಗಲಕೋಟೆ ಶಾಸಕ ಎಚ್.ವೈ.ಮೇಟಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು ರಾಜ್ಯದ ಅಭಿವೃದ್ಧಿ ಮತ್ತು ಸಮಾಜದ ಎಲ್ಲಾ ವರ್ಗಗಳಿಗೆ ಸಮಾನ ಅವಕಾಶ ಒದಗಿಸುವ ನಿಟ್ಟಿನಲ್ಲಿ ಹಿಂದುಳಿದ ವರ್ಗಗಳ ಆಯೋಗದಿಂದ ಸಮೀಕ್ಷೆ ಕಾರ್ಯ ನಡೆಸಲಾಗುತ್ತಿದೆ ಎಂದು ಹೇಳಿದರು. ಮಂಡ್ಯದಲ್ಲಿ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷೆಗೆ ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಚಾಲನೆ ನೀಡಿದರು. ಮಂಡ್ಯ ಜಿಲ್ಲೆಯಲ್ಲಿ ೫ ಲಕ್ಷದ ೧೯ ಸಾವಿರದ ೩೧ ಕುಟುಂಬಗಳಿದ್ದು, ೪ ಸಾವಿರದ ೪೪೭ ಗಣತಿದಾರರನ್ನು ನೇಮಕ ಮಾಡಲಾಗಿದೆ ಎಂದು ಅವರು ಹೇಳಿದರು. ಮನೆ-ಮನೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯಕ್ಕೆ ವಿಜಯಪುರ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಜಂಟಿಯಾಗಿ ಚಾಲನೆ ನೀಡಿದರು. ಬೆಂಗಳೂರು ಗ್ರಾಮಾಂತರದಲ್ಲಿ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಸಮೀಕ್ಷೆಗೆ ಚಾಲನೆ ನೀಡಿದರು.

><><><><

ಮೈಸೂರು ದಸರಾ ಮಹೋತ್ಸವದ ದಸರಾ ಫಲಪುಷ್ಪ ಪ್ರದರ್ಶನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಉದ್ಘಾಟಿಸಿದರು. ಬಳಿಕ ಸಚಿವರೊಂದಿಗೆ ಕೆಲ ಕಾಲ ಫಲಪುಷ್ಪ ಪ್ರದರ್ಶನವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಈ ಬಾರಿ ಜಂಬೂಸವಾರಿ ದಿನವೇ ಗಾಂಧಿ ಜಯಂತಿ ಇರುವ ಕಾರಣ ಮಹಾತ್ಮ ಗಾಂಧಿಯವರ ನೆನಪಿಗಾಗಿ ಕುಪ್ಪಣ್ಣ ಉದ್ಯಾನದಲ್ಲಿರುವ ಗಾಜಿನ ಮನೆಯಲ್ಲಿ ೩ ಲಕ್ಷ ಗುಲಾಬಿ ಹೂಗಳಿಂದ ಕನ್ಯಾಕುಮಾರಿಯಲ್ಲಿರುವ ಗಾಂಧಿ ಮಂಟಪದ ಆಕೃತಿ ನಿರ್ಮಿಸಲಾಗಿದೆ. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಮಹಾರಾಜ ಕಾಲೇಜು ಮೈದಾನದಲ್ಲಿ ದಸರಾ ಆಹಾರೋತ್ಸವವನ್ನು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಕಳೆದ ಎಂಟು ವರ್ಷಗಳಿಂದ ಜನರಿಂದ ಅತ್ಯಂತ ಹೆಚ್ಚು ಜಿಎಸ್‌ಟಿ ಸಂಗ್ರಹಿಸಿದ್ದು, ಅದನ್ನು ಹಿಂತಿರುಗಿಸಲಾಗುತ್ತದೆಯೇ ಎಂದು ಪ್ರಶ್ನಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (  ೨೭ ಸೆಕೆಂಡುಗಳು) ಖಓU

ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಸ್ತಿ ಪಂದ್ಯಾವಳಿ ಹಾಗೂ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಸಿಎಂ ಕಪ್ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

><><><><

ನಾಳೆ ದೇಶಾದ್ಯಂತ ನಾಳೆ ೧೦ನೇ ಆಯುರ್ವೇದ ದಿನ ಆಚರಿಸಲಾಗುತ್ತಿದೆ. ಈ ದಿನ ನೈಸರ್ಗಿಕ ಸಂಪನ್ಮೂಲಗಳ ಸುಸ್ಥಿರ ಬಳಕೆ ಔಷಧೀಯ ಯೋಜನೆಗಳ ಸಂರಕ್ಷಣೆ ಕುರಿತಂತೆ ಜಾಗೃತಿ ಮೂಡಿಸಲಾಗುತ್ತಿದೆ. ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿ ನಾಳೆ ೧೦ನೇ ರಾಷ್ಟ್ರೀಯ ಆಯುರ್ವೇದ ದಿನ ಆಯೋಜಿಸಲಾಗಿದೆ. ಆಯುಷ್ ಮಾನ್ ಕಾರ್ಯಕ್ರಮಕ್ಕೆ ಹಿರಿಯ ನರರೋಗ ತಜ್ಞ ಹಾಗೂ ನಿಮ್ಹಾನ್ಸ್ ನ ನಿವೃತ್ತ ನಿರ್ದೇಶಕರಾದ ಡಾ.ಡಿ.ನಾಗರಾಜ್ ಚಾಲನೆ ನೀಡಲಿದ್ದಾರೆ. ಯಾವುದೇ ದೈಹಿಕ ಮತ್ತು ಮಾನಸಿಕ ಸಮಸ್ಯೆ ಇಲ್ಲದೆ ಸದೃಡ ಆರೋಗ್ಯ ಕಾಪಾಡಬೇಕಾದರೆ ಆಯುರ್ವೇದ ಗಿಡಮೂಲಿಕೆಗಳು ಮತ್ತು ಔಷಧಗಳೇ ಸೂಕ್ತ ಎಂದು ಆಯುಷ್ ಇಲಾಖೆಯ ವೈದ್ಯಾಧಿಕಾರಿ ಡಾ.ಮುನಿವಾಸುದೇವ ರೆಡ್ಡಿ ತಿಳಿಸಿದ್ದಾರೆ. ವಿಜಯನಗರ ಸರ್ಕಾರಿ ಆಯುರ್ವೇದ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ಪತಂಜಲಿ ಯೋಗ ಸಂಸ್ಥೆ ಸಹಭಾಗಿತ್ವದಲ್ಲಿ ಹಮ್ಮಿಕೊಂಡಿದ್ದ 'ಆಯುರ್ವೇದ ನಡಿಗೆ ಜಾಥಾ'ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು. ಆಯುರ್ವೇದವು ಕೇವಲ ರೋಗಲಕ್ಷಣಗಳನ್ನು ನಿಗ್ರಹಿಸುವುದಲ್ಲದೆ, ಸಮಸ್ಯೆಯ ಮೂಲ ಕಾರಣವನ್ನು ಗುರುತಿಸಿ ಚಿಕಿತ್ಸೆ ನೀಡಲು ಸೂಕ್ತ ವೈದ್ಯಕೀಯ ಕ್ರಮವಾಗಿದೆ ಎಂದು ಪ್ರತಿಪಾದಿಸಿದರು.

><><><><

ದೇಶಾದ್ಯಂತ ಇಂದಿನಿಂದ ಜಾರಿಯಾಗಿರುವ ಹೊಸ ಜಿಎಸ್‌ಟಿ ಪದ್ದತಿಯಿಂದ ಜನಸಾಮಾನ್ಯರಿಗೆ ಬಹಳಷ್ಟು ಸಹಾಯವಾಗಿದೆ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತುಮಕೂರಿನಲ್ಲಿಂದು ನಗರದ ವಿವಿಧೆಡೆ ಜಿಎಸ್‌ಟಿ ಸುಧಾರಣೆಗಳ ಪ್ರಚಾರ ಅಭಿಯಾನ ನಡೆಸಿ ಸಾರ್ವಜನಿಕರಿಗೆ ಹೊಸ ತೆರಿಗೆ ಪದ್ಧತಿಯ ಪ್ರಯೋಜನಗಳನ್ನು ಮನವರಿಕೆ ಮಾಡಿದರು. ಅಗತ್ಯ ವಸ್ತುಗಳ ಮೇಲಿನ ತೆರಿಗೆಯನ್ನು ಕಡಿಮೆ ಮಾಡಿ ದೇಶದ ಬಡವರು ಮತ್ತು ಮಧ್ಯಮ ವರ್ಗದವರ ಸುಗಮ ಜೀವನಕ್ಕೆ ಹಾಗೂ ಅವರ ಉಳಿತಾಯಕ್ಕೆ ಶಕ್ತಿ ತುಂಬಲಾಗಿದೆ ಎಂದು ಸಚಿವ ಸೋಮಣ್ಣ ಹೇಳಿದರು.

><><><><

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಜಿಎಸ್‌ಟಿ ತೆರಿಗೆ ಇಳಿಸುವ ಮೂಲಕ ಜನಪರ ಸರ್ಕಾರವಾಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಮಂಡ್ಯದಲ್ಲಿಂದು ಶ್ಲಾಘಿಸಿದ್ದಾರೆ. ಜಿಎಸ್‌ಟಿ ತೆರಿಗೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದಲ್ಲಿ ಇಳಿಸುತ್ತಾರಾ ಎಂದು ಮಾಜಿ ಮುಖ್ಯಮಂತ್ರಿ  ಬಸವರಾಜ ಬೊಮ್ಮಾಯಿ ಪ್ರಶ್ನಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಜನ ಸಾಮಾನ್ಯರು  ಬಳಕೆ ಮಾಡುವ ಮೊಸರು, ಹಾಲು, ತುಪ್ಪ ಸೇರಿದಂತೆ ಬಹುತೇಕ ಎಲ್ಲ ವಸ್ತುಗಳ ಬೆಲೆ ಕಡಿಮೆಯಾಗಲಿದೆ ಎಂದು ಹೇಳಿದ್ದಾರೆ.

ದೇಶದ ಜನರಲ್ಲಿ ಖರೀದಿ ಶಕ್ತಿಯನ್ನು ಹೆಚ್ಚಿಸುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ಜಿಎಸ್’ಟಿ ದರವನ್ನು ಕಡಿಮೆ ಮಾಡಿದ್ದು, ಪ್ರಧಾನಿ ಅವರನ್ನು ಅಭಿನಂದಿಸುವುದಾಗಿ ಸಂಸದ ಬಿ.ವೈ.ರಾಘವೇಂದ್ರ ಹುಬ್ಬಳ್ಳಿಯಲ್ಲಿ  ತಿಳಿಸಿದ್ದಾರೆ.

ಧ್ವನಿ : ಸಂಸದ ಬಿ.ವೈ. ರಾಘವೇಂದ್ರ, ( ೩೩ ಸೆಕೆಂಡುಗಳು)

ಜಿಎಸ್‌ಟಿ ಇಳಿಕೆಯಿಂದ ದೇಶದ ಜನರಿಗೆ ವಾರ್ಷಿಕ ೧ ಲಕ್ಷ ಕೋಟಿ ರೂಪಾಯಿ ಉಳಿತಾಯವಾಗಲಿದೆ ಎಂದು ದಾವಣಗೆರೆ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜಶೇಖರ್ ನಾಗಪ್ಪ ತಿಳಿಸಿದ್ದಾರೆ.

><><><><

ಮಕ್ಕಳಲ್ಲಿ ಅಪೌಷ್ಟಿಕತೆ ದೂರವಾಗಲು ಮುಂಜಾಗ್ರತಾ ಕ್ರಮವಾಗಿ ಗರ್ಭಿಣಿ ಹಾಗೂ ಬಾಣಂತಿಯರು ನಿತ್ಯ ತರಕಾರಿ, ಹಣ್ಣುಗಳು ಸೇರಿದಂತೆ ಪೌಷ್ಟಿಕ ಆಹಾರ ಸೇವನೆಗೆ ಆದ್ಯತೆ ನೀಡಬೇಕು ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ತಿಪ್ಪಣ್ಣ ಶಿರಸಗಿ ತಿಳಿಸಿದ್ದಾರೆ.

><><><><

ರಾಜ್ಯದ ಉತ್ತರ ಒಳನಾಡಿನಲ್ಲಿ ನೈರುತ್ಯ ಮುಂಗಾರು ಸಕ್ರಿಯವಾಗಿದ್ದು, ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನಲ್ಲಿ ದುರ್ಬಲವಾಗಿತ್ತು. ಇಂದು ರಾಯಚೂರು, ಕೊಪ್ಪಳ, ಬಾಗಲಕೋಟೆ, ವಿಜಯಪುರ, ಯಾದಗಿರಿ ಮತ್ತು ಕಲಬುರ್ಗಿ ಜಿಲ್ಲೆಗಳ ಕೆಲವೆಡೆ ಭಾರೀ ಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಬೆಳಗಾವಿ, ಬೀದರ್, ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಬಿರುಗಾಳಿ ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

ಬೆಂಗಳೂರಿನಲ್ಲಿ ಮೋಡ ಕವಿದ ವಾತವರಣವಿದ್ದು, ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

><><><><><

ರಾಜ್ಯದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ / ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ ೧೦೯೮ ಅನ್ನು ಕಡ್ಡಾಯವಾಗಿ ನಮೂದಿಸಬೇಕು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಸೂಚನೆ ನೀಡಿದ್ದಾರೆ.

><><>END<><><